ರಾಮನಗರ ಜಿಲ್ಲೆಯ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ವ್ಯವಸ್ಥೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 109 (433)
ಸದಸ್ಯರ ಹೆಸರು : ಶ್ರೀ ರಾಜು. ಕೆ (ರಾಮನಗರ)
ಉತ್ತರಿಸುವ ಸಚಿವರು : ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಸಚಿವರು)

ಪ್ರಶ್ನೆಗಳು:

ಅ) ರಾಮನಗರ ಜಿಲ್ಲೆಯ ವ್ಯಾಪ್ತಿಯಲ್ಲಿ ಕುಡಿಯುವ ನೀರಿನಲ್ಲಿ ಫ್ಲೋರೈಡ್ ಅಂಶವು ಹೆಚ್ಚಾಗಿ ಇಲ್ಲಿನ ನಾಗರೀಕರು ರೋಗ-ರುಜಿನಗಳಿಗೆ ತುತ್ತಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಫ್ಲೋರೈಡ್ ರಹಿತ ಕುಡಿಯುವ ನೀರನ್ನು ಸರಬರಾಜು ಮಾಡುವ ಬಗ್ಗೆ ಸರ್ಕಾರ ಯೋಜನೆಯನ್ನೇನಾದರೂ ರೂಪಿಸಿದೆಯೇ? ಹಾಗಿಲ್ಲದಿದ್ದಲ್ಲಿ ಕಾರಣಗಳೇನು?

ಉತ್ತರಗಳು:

ಅ) ರಾಮನಗರ ಜಿಲ್ಲಾ ಪ್ರಯೋಗಾಲಯದಲ್ಲಿ ಎಲ್ಲಾ ಕುಡಿಯುವ ನೀರಿನ ಜಲಮೂಲಗಳ ಪರೀಕ್ಷೆ ನಡೆಸಲಾಗಿದ್ದು, 36 ಜನವಸತಿಗಳಲ್ಲಿ ಫ್ಲೋರೈಡ್ ಅಂಶವಿರುವುದು ಕಂಡುಬಂದಿರುತ್ತದೆ. ಸದರಿ ಫ್ಲೋರೈಡ್‌ಯುಕ್ತ ಜಲಮೂಲಗಳ ಬದಲಿಗೆ ಶುದ್ಧ ಕುಡಿಯುವ ನೀರಿನ ಪರ್ಯಾಯ ವ್ಯವಸ್ಥೆ ಕಲ್ಪಿಸಲು ಕ್ರಮ ಕೈಗೊಂಡಿದ್ದು, ಸದರಿ ಜನವಸತಿಗಳಲ್ಲಿ ಫ್ಲೋರೈಡ್‌ನಿಂದ ಯಾವುದೇ ನಾಗರೀಕರು ರೋಗ-ರುಜಿನಗಳಿಗೆ ತುತ್ತಾಗಿರುವುದು ಕಂಡುಬಂದಿರುವುದಿಲ್ಲ.

ಆ) ಫ್ಲೋರೈಡ್ ಬಾಧೆಗೊಳಗಾಗಿರುವ ಜನವಸತಿಗಳಿಗೆ ಭೂಮಿ ಮೇಲ್ಮೈ ಜಲಮೂಲ ಆಧರಿಸಿ, ರೂ. 218.82 ಕೋಟಿ ಅಂದಾಜು ಮೊತ್ತದ 6 ಪ್ರತ್ಯೇಕ ಬಹುಗ್ರಾಮ ಯೋಜನೆಗಳನ್ನು ಮಂಜೂರು ಮಾಡಲಾಗಿದೆ. ಅನುಮೋದಿತ ಯೋಜನಾ ಕಾಮಗಾರಿಗಳನ್ನು ಆದ್ಯತೆ ಮೇಲೆ ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ.